**Bangalore**
**Regional News**
**15.01.2026: 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ರಾಜ್ಯಾದ್ಯಂತ ಮಕರ ಸಂಕ್ರಾಂತಿ ಸಡಗರ; ಗಣ್ಯರಿಂದ ಶುಭಾಶಯ
2. ಸಾರ್ವಜನಿಕವಾಗಿ ಗೂಂಡಾವರ್ತನೆ ತೋರುವವರ ವಿರುದ್ಧ ಕಠಿಣ ಕಾನೂನು ಕ್ರಮಕ್ಕೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಗ್ರಹ
3. ಕಾಗಿನೆಲೆ ಕನಕ ಗುರುಪೀಠದ ಪೀಠಾಧಿಪತಿ ಶ್ರೀ ಸಿದ್ಧರಾಮಾನಂದಪುರಿ ಸ್ವಾಮೀಜಿ ನಿಧನ; ಗಣ್ಯರ ಸಂತಾಪ
4. ಅಖಿಲ ಭಾರತ ಅಂತರ್ ವಿಶ್ವವಿದ್ಯಾಲಯ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್; ನಾಲ್ಕನೆಯ ದಿನವೂ ಅಗ್ರ ಸ್ಥಾನ ಕಾಯ್ದುಕೊಂಡ ಮಂಗಳೂರು ವಿಶ್ವವಿದ್ಯಾಲಯ

**********

ರಾಜ್ಯಾದ್ಯಂತ ಮಕರ ಸಂಕ್ರಾಂತಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಕೋಲಾರ ನಗರದ ಗಂಗರ ಕಾಲದಲ್ಲಿ ನಿರ್ಮಿತವಾದ ಸೋಮೇಶ್ವರ ದೇವಾಲಯ ಹಾಗೂ ಕೋಟಿ ಲಿಂಗ ದೇವಾಲಯ ಸೇರಿದಂತೆ ಶಿವನ ದೇವಾಲಯಗಳಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ಜರುಗುತ್ತಿವೆ. ಭಕ್ತರು ಶಿವನ ದೇವಾಲಯಗಳಿಗೆ ತೆರಳಿ ದರ್ಶನ ಪಡೆಯುತ್ತಿದ್ದಾರೆ. ದರ ಏರಿಕೆ ನಡುವೆಯೂ ನಿನ್ನೆಯಿಂದಲೇ ಹೂ, ಕಬ್ಬು, ಹಣ್ಣು, ಎಳ್ಳು ಬೆಲ್ಲ, ಕಳ್ಳೆಕಾಯಿ, ಗೆಣಸು ಖರೀದಿ ಜೋರಾಗಿತ್ತು. ಹಳ್ಳಿಗಳಲ್ಲಿ ಹಸು ಕರುಗಳನ್ನು ಸ್ವಚ್ಛಗೊಳಿಸಿ, ಅವುಗಳನ್ನು ವಿವಿಧ ಬಣ್ಣಗಳಿಂದ ಶೃಂಗರಿಸಲಾಗುತ್ತಿದೆ. ಗ್ರಾಮಗಳಲ್ಲಿ ಮಧ್ಯಾಹ್ನ ದನಗಳ ಮೆರವಣಿಗೆ ನಡೆಯಲಿದೆ. ಸಂಜೆ ಕಿಚ್ಚು ಹಾಯಿಸುವ ಕಾರ್ಯಕ್ರಮ ಸಹ ಜರುಗಲಿದೆ. ಸುಗ್ಗಿ ಹಬ್ಬ ಮಕರ ಸಂಕ್ರಾಂತಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಡಗರದಿಂದ ಆಚರಿಸಲಾಗುತ್ತಿದೆ. ಎಳ್ಳು ಬೀರುವ ಆಚರಣೆ ಮೂಲಕ ಜನತೆ ಎಳ್ಳು ಬೆಲ್ಲವನ್ನು ವಿನಿಮಯ ಮಾಡಿಕೊಂಡು, ಸಂಕ್ರಾಂತಿ ಶುಭಾಶಯಗಳನ್ನು ಕೋರಿದರು. ಮನೆಗಳ ಮುಂದೆ ಸಂಕ್ರಾಂತಿಯ ವಿಶೇಷ ಶುಭಾಶಯಗಳನ್ನು ಕೋರುವ ಬಣ್ಣ ಬಣ್ಣದ ರಂಗೋಲಿಗಳ ಚಿತ್ತಾರವು ಹಬ್ಬಕ್ಕೆ ಮೆರುಗು ನೀಡಿವೆ. ರೈತನ ದುಡಿಮೆಯಲ್ಲಿ ಭಾಗಿಯಾಗುವ ರಾಸುಗಳಿಗೆ ಮೈ ತೊಳೆದು, ಕೊಂಬುಗಳಿಗೆ ಬಣ್ಣಗಳನ್ನು ಬಳಿದು ವಿಶೇಷ ಅಲಂಕಾರ ಮಾಡಿ, ಕಬ್ಬು, ಅವರೇಕಾಯಿ, ಕಡಲೇಕಾಯಿಗಳನ್ನು ಗೋವುಗಳಿಗೆ ನೈವೇದ್ಯ ಮಾಡಿ ಪೂಜಿಸುತ್ತಿದ್ದ ದೃಶ್ಯ

ಸಾಮಾನ್ಯವಾಗಿತ್ತು. ದೊಡ್ಡಬಳ್ಳಾಪುರ ತಾಲೂಕಿನ ಗ್ರಾಮಾಂತರ ಪ್ರದೇಶದಲ್ಲಿ ಸಂಕ್ರಾಂತಿಯಂದು ಆಚರಿಸುವ ಕಾಟಿಮರಾಯನ ಹಬ್ಬದಲ್ಲಿ ರೈತರು ತಮ್ಮ ರಾಸುಗಳನ್ನು ವಿಶೇಷವಾಗಿ ಅಲಂಕರಿಸಿ, ಕಾಟಿಮರಾಯನಿಗೆ ಪೂಜೆ ಸಲ್ಲಿಸಿ ಹರಕೆ ತೀರಿಸಿದರು. ರಾಸುಗಳಿಗೆ ಕಿಚ್ಚು ಹಾಯಿಸುವ ಆಚರಣೆಗಳಿಗೆ ಸಿದ್ಧತೆಗಳು ನಡೆಯುತ್ತಿವೆ. ಜಿಲ್ಲೆಯ ಘಾಟಿ ಕ್ಷೇತ್ರದ ಸುಬ್ರಹ್ಮಣ್ಯ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳಲ್ಲಿ ವಿಶೇಷ ಅಲಂಕಾರ ಮತ್ತು ಪೂಜಾ ಕಾರ್ಯಕ್ರಮಗಳು ನಡೆಯುತ್ತಿವೆ. ನೆಲಮಂಗಲ ತಾಲೂಕಿನ ಶಿವಗಂಗೆಯ ಗಂಗಾಧರೇಶ್ವರ ದೇವಾಲಯದಲ್ಲಿ ವಿಶೇಷ ಅಲಂಕಾರ, ಪೂಜಾ ಕಾರ್ಯಕ್ರಮ, ಗಿರಿಜಾ ಕಲ್ಯಾಣೋತ್ಸವ ನಡೆಯಿತು. ಮಕರ ಸಂಕ್ರಾಂತಿ ಹಬ್ಬದ ಹಿನ್ನಲೆಯಲ್ಲಿ ಮಂಡ್ಯ ಜಿಲ್ಲೆಯ ಹಲವು ದೇಗುಲಗಳಲ್ಲಿ ವಿಶೇಷ ಪೂಜೆ ಏರ್ಪಡಿಸಲಾಗಿತ್ತು. ಶ್ರೀರಂಗಪಟ್ಟಣ ತಾಲೂಕಿನ ಕಾಶಿ ಚಂದ್ರಮೌಳೇಶ್ವರ ದೇಗುಲದಲ್ಲಿ ಇಂದು ಬೆಳಗ್ಗೆ ಸೂರ್ಯನ ಕಿರಣ ದೇವರ ಮೇಲೆ ಸ್ಪರ್ಶಿಸುವುದನ್ನು ನೋಡಲು ಜನಸಾಗರ ಹರಿದುಬಂದಿತ್ತು. ಜಿಲ್ಲೆಯ ಹಲವು ದೇಗುಲಗಳಲ್ಲಿ ವಿಶೇಷ ಪೂಜೆ ನೆರವೇರಿಸಲಾಗಿದ್ದು, ನೂರಾರು ಭಕ್ತರು ದೇಗುಲಕ್ಕೆ ಭೇಟಿ ನೀಡುತ್ತಿದ್ದದ್ದು ಕಂಡುಬಂತು. ಮುಜರಾಯಿ ವ್ಯಾಪ್ತಿಯ ದೇಗುಲಗಳಲ್ಲಿ ಎಳ್ಳು- ಬೆಲ್ಲ ಹಂಚಲಾಗುತ್ತಿದೆ. ಮಕರ ಸಂಕ್ರಾಂತಿ ಹಬ್ಬದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸೇರಿದಂತೆ ಅನೇಕ ಗಣ್ಯರು ನಾಡಿನ ಜನತೆಗೆ ಹಬ್ಬದ ಶುಭಾಶಯ ಕೋರಿದ್ದಾರೆ.

**********

ಸರ್ಕಾರಿ ಅಧಿಕಾರಿಗಳ ಮೇಲೆ ಹಾಗೂ ಸಾರ್ವಜನಿಕವಾಗಿ ಗುಂಡಾವರ್ತನೆ ತೋರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಎಚ್.ಡಿ.ಕುಮಾರಸ್ವಾಮಿ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಠಿಣ ಕ್ರಮ ಕೈಗೊಳ್ಳದಿದ್ದರೆ, ಸಮಾಜದಲ್ಲಿ ಅಹಿತಕರ ಘಟನೆಗಳು ಪದೇ ಪದೆ ಮರುಕಳಿಸುತ್ತವೆ. ಶಿಡ್ಲಘಟ್ಟದಲ್ಲಿ ಪುರಸಭೆ ಆಯುಕ್ತರ ಮೇಲೆ ದಬ್ಬಾಳಿಕೆ ನಡೆಸಿದವರ ಮೇಲೆ ಕಾನೂನು ರೀತಿ ಕ್ರಮ ತೆಗೆದುಕೊಳ್ಳಬೇಕು. ಅಧಿಕಾರಿಗಳಿಂದ ಕಾನೂನುಬಾಹಿರವಾಗಿ ಕೆಲಸ ಮಾಡಿಸಬಾರದು. ಅಧಿಕಾರಿಗಳು ಸಹ ಆತ್ಮಸಾಕ್ಷಿಯಂತೆ ಕಾರ್ಯನಿರ್ವಹಿಸಬೇಕು ಎಂದರು. ತಾವು ರಾಜ್ಯ ರಾಜಕಾರಣಕ್ಕೆ ಆಗಮಿಸುವ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯದ ಜನ ತೀರ್ಮಾನ ಕೈಗೊಳ್ಳಲಿದ್ದಾರೆ. ಜೆಡಿಎಸ್ ಹಾಗೂ ಬಿಜೆಪಿ ನಡುವಿನ ಮೈತ್ರಿ ಸುಗಮವಾಗಿ ಮುನ್ನಡೆಯಬೇಕು ಎಂಬುದು ತಮ್ಮ ಆಶಯವಾಗಿದೆ. ರಾಜ್ಯ ರಾಜಕಾರಣದಲ್ಲೂ ತಮ್ಮ ಪಾತ್ರ ಇರುತ್ತದೆ. ಕೇಂದ್ರದಲ್ಲಿ

ಪ್ರಧಾನಿ ನರೇಂದ್ರ ಮೋದಿ ಅವರು ನೀಡಿರುವ ಎರಡು ಇಲಾಖೆಗಳಲ್ಲಿ ಉತ್ತಮ ಕೆಲಸ ಮಾಡಲು ಆದ್ಯತೆ ನೀಡುವುದಾಗಿ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

**********

ಮಂಗಳೂರು ಬೈಪಾಸ್ ಮೂಲಕ ಹಾದುಹೋಗುವ ಸುರತ್ಕಲ್-ಬಿ.ಸಿ.ರೋಡ್ ಹೆದ್ದಾರಿ ವಿಸ್ತರಣೆ ಹಾಗೂ ತಲಪಾಡಿಯಿಂದ ಕುಂದಾಪುರದವರೆಗಿನ ಎನ್‌ಎಚ್-೬೬ರ ಹೆದ್ದಾರಿಯಲ್ಲಿ ಸರ್ವೀಸ್ ರಸ್ತೆ ನಿರ್ಮಾಣಕ್ಕೆ ವಿಸ್ತೃತ ಯೋಜನಾ ವರದಿ ತಯಾರಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ ಎಂದು ದಕ್ಷಿಣ ಕನ್ನಡ ಸಂಸದ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಈ ಹೆದ್ದಾರಿಗಳು ಮಂಗಳೂರು ನಗರ ಪ್ರವೇಶಿಸುವ ಹೆಬ್ಬಾಗಿಲಾಗಿ ಪ್ರತಿನಿತ್ಯವೂ ನೂರಾರು ಪ್ರಯಾಣಿಕರ ಸಂಚಾರಕ್ಕೆ ಪ್ರಮುಖ ಸಂಪರ್ಕ ರಸ್ತೆಗಳಾಗಿವೆ. ಜತೆಗೆ, ಕರಾವಳಿಯ ವಾಣಿಜ್ಯ ಚಟುವಟಿಕೆಗಳ ಹಬ್ ಆಗಿರುವ ಬಂದರಿಗೆ ಸರಕು ಸಾಗಣೆ ಹಾಗೂ ಭಾರೀ ವಾಹನಗಳ ಓಡಾಟಕ್ಕೂ ಪ್ರಮುಖ ಸಂಪರ್ಕ ಕೊಂಡಿಯಾಗಿ ಈ ಹೆದ್ದಾರಿಗಳು ಗುರುತಿಸಿಕೊಂಡಿವೆ ಎಂದರು. ಬಿ.ಸಿ.ರೋಡ್-ಸುರತ್ಕಲ್ ಹೆದ್ದಾರಿಯನ್ನು ಮೇಲ್ದರ್ಜೆಗೇರಿಸುವ ಜತೆಗೆ ತಲಪಾಡಿಯಿಂದ ಕುಂದಾಪುರದವರೆಗೆ ಸರ್ವೀಸ್ ರಸ್ತೆ ನಿರ್ಮಿಸಬೇಕೆಂಬುದು ಈ ಭಾಗದ ಜನರ ಪ್ರಮುಖ ಬೇಡಿಕೆ ಕೂಡ ಆಗಿತ್ತು. ಅದು ಈಗ ಈಡೇರಿರುವುದು ಹರ್ಷ ತಂದಿದೆ ಎಂದು ಸಂಸದ ಬ್ರಿಜೇಶ್ ಚೌಟ ಹೇಳಿದರು.

**********

ವಿಜಯಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತೋಟಗಾರಿಕೆ ಇಲಾಖೆ, ಜಿಲ್ಲಾ ತೋಟಗಾರಿಕೆ ಸಂಘ, ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ ಹಾಗೂ ಜಿಲ್ಲಾ ಹಾಪ್‌ಕಾಮ್ಸ್ ಸಹಯೋಗದೊಂದಿಗೆ ನಗರದ ಬಸವವನದಲ್ಲಿ ಫಲಪುಷ್ಪ ಪ್ರದರ್ಶನ ಹಮ್ಮಿಕೊಂಡಿದೆ.ವಿವಿಧ ತರಹದ ಹೂ-ಹಣ್ಣು ಹಾಗೂ ತರಕಾರಿಗಳಿಂದ ನಿರ್ಮಿಸಲಾದ ಅಪರೂಪದ ಕಲಾಕೃತಿಗಳು ಜನಾಕರ್ಷಣೆಯವಾಗಿವೆ. ಒಂದಕ್ಕಿಂತ ಒಂದು ವಿಭಿನ್ನ ಆಲೋಚನೆ, ಸೃಜನಶೀಲತೆ ಹಾಗೂ ನೈಸರ್ಗಿಕ ಸೌಂದರ್ಯ ಅನಾವರಣಗೊಂಡಿದೆ. ಹೂವಿನಲ್ಲಿ ಅರಳಿದ ಗೋಲಗುಮ್ಮಟ, ಗಿಡದಲ್ಲಿ ಕುಳಿತ ನಾಟ್ಯ ಮಯೂರಿ, ವೃಕ್ಷಮಾತೆ ಸಾಲುಮರದ ತಿಮ್ಮಕ್ಕ, ಹೂವಿನಲ್ಲಿ ಮೂಡಿಬಂದ ಡಾಲ್ಫಿನ್, ಮಾರಾಟಕ್ಕೆ ಬಂದ ಪುಷ್ಪಲತಾ ಚಿತ್ರ, ನೀರಿನಿಂದ ಹೊರಬಂದ ಹಂಸ ಸೇರಿದಂತೆ ಮುಂತಾದ ಕಲಾಕೃತಿಗಳು ಗಮನಸೆಳೆಯುತ್ತಿವೆ.ಜಿಲ್ಲೆಯ ಹೆಮ್ಮೆಯನ್ನು ಹೆಚ್ಚಿಸಿದ ಭೌಗೋಳಿಕ ಮಾನ್ಯತೆ ಪಡೆದ ಇಂಡಿ ಲಿಂಬೆ, ವಿವಿಧ ಬಗೆಯ ಹೂಗಳಿಂದ ನಿರ್ಮಾಣವಾದ ಕಲಾಕೃತಿಗಳು, ಆರೋಗ್ಯ ಸಂದೇಶವನ್ನು ಸಾರುವ ಹಣ್ಣುಗಳ ಕಲಾಕೃತಿ, ತರಕಾರಿಯಲ್ಲಿ ಸೃಷ್ಟಿಸಿದ ಮಹಾಪುರುಷರ ಆಕೃತಿಗಳನ್ನು ಪ್ರದರ್ಶನದಲ್ಲಿ ಕಾಣಬಹುದಾಗಿದೆ. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗಾಗಿ,

ನಾಗರಿಕರಿಗೆ, ಗೃಹಿಣಿಯರಿಗೆ ಬೋನ್ಸಾಯ ಗಿಡಗಳ ಬೇಸಾಯ, ಅಣಬೆ ಬೇಸಾಯ, ಕೈತೋಟ, ಸಾವಯವ ಕೃಷಿಗೆ ಉತ್ತೇಜನ ನೀಡಲು ಪ್ರದರ್ಶಿಸಲಾಗಿದೆ. ರೈತರಿಗೆ ಮಾಹಿತಿ ನೀಡಲು ತೋಟಗಾರಿಕೆ ಸೇವಾ ಕೇಂದ್ರ, ವಿವಿಧ ಯಂತ್ರೋಪಕರಣ, ಹನಿ ನೀರಾವರಿ ಉಪಕರಣಗಳು ಹಾಗೂ ಇತರ ಪರಿಕರ ಮಳಿಗೆಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾ ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ರಾಹುಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**********

ದೇವದುರ್ಗ ತಾಲೂಕಿನ ತಿಂಥಣಿ ಬ್ರಿಜ್ ಕಾಗಿನೆಲೆ ಕನಕ ಗುರುಪೀಠದ ಪೀಠಾಧಿಪತಿಗಳಾದ ಶ್ರೀ ಸಿದ್ಧರಾಮಾನಂದಪುರಿ ಸ್ವಾಮೀಜಿ ನಿಧನರಾಗಿದ್ದಾರೆ. ಅವರಿಗೆ ೫೫ ವರ್ಷ ವಯಸ್ಸಾಗಿತ್ತು. ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.ಶ್ರೀ ಸಿದ್ಧರಾಮಾನಂದಪುರಿ ಮಹಾಸ್ವಾಮಿಗಳು ದೈವಾಧೀನರಾದ ಸುದ್ದಿ ನೋವುಂಟು ಮಾಡಿದೆ. ಧಾರ್ಮಿಕ ಕಾರ್ಯಗಳ ಜೊತೆಗೆ ಸಮಾಜದ ಏಳಿಗೆಯ ಬಗ್ಗೆ ಅಪಾರ ಕಾಳಜಿ, ಶ್ರದ್ಧೆ ಹೊಂದಿದ್ದ ಶ್ರೀಗಳ ಅಗಲಿಕೆ, ನಾಡಿಗೆ ತುಂಬಲಾರದ ನಷ್ಟ ಎಂದು ಸಾಮಾಜಿಕ ಜಾಲತಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಸ್ವಾಮೀಜಿಗಳು ಬಾಲ್ಯದಿಂದಲೇ ಅಧ್ಯಾತ್ಮಿಕ ಚಿಂತನೆಗಳನ್ನು ಬೆಳೆಸಿಕೊಂಡಿದ್ದರು. ರಾಯಚೂರು ಜಿಲ್ಲೆ ದೇವದುರ್ಗ ತಾಲೂಕಿನ ತಿಂಥಣಿ ಬ್ರಿಜ್ ಬಳಿ ಕನಕಗುರು ಪೀಠ ಸ್ಥಾಪನೆ ಮಾಡಿ ಪೀಠಾಧಿಪತಿಗಳಾದರು. ಆ ಮೂಲಕ ಸಮಾಜಸೇವೆ, ಉಚಿತ ಶಿಕ್ಷಣ, ದಾಸೋಹ, ಸರ್ವಧರ್ಮ ಸಮನ್ವಯತೆ ಮೈಗೂಡಿಸಿಕೊಳ್ಳುವುದರ ಜೊತೆಗೆ ಪ್ರಗತಿಪರ ಚಿಂತನೆಯುಳ್ಳ ಸಾಮಾಜಿಕ ಕಳಕಳಿಯುಳ್ಳವರಾಗಿದ್ದರು ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

**********

ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆಯ ಸ್ವರಾಜ್ ಮೈದಾನದಲ್ಲಿ ನಡೆಯುತ್ತಿರುವ ೮೫ನೇ ಅಖಿಲ ಭಾರತ ಅಂತರ್ ವಿಶ್ವವಿದ್ಯಾಲಯ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ಇಂದು ಕೂಡ ವಿವಿಧ ವಿಭಾಗಗಳಲ್ಲಿ ಕ್ರೀಡಾಪ್ರತಿಭೆಗಳಿಂದ ಜಿದ್ದಾಜಿದ್ದಿನ ಪೈಪೋಟಿ ಮುಂದುವರಿದಿದ್ದು, ಉರಿ ಬಿಸಿಲಿನ ನಡುವೆಯೂ ಅತ್ಯುತ್ತಮ ಪ್ರದರ್ಶನ ನೀಡುತ್ತಿದ್ದಾರೆ. ನಿನ್ನೆ ೭೨ ಅಂಕಗಳೊಂದಿಗೆ ಕೂಟದಲ್ಲಿ ಅಗ್ರ ಸ್ಥಾನ ಕಾಯ್ದುಕೊಂಡಿದ್ದ ಮಂಗಳೂರು ವಿಶ್ವವಿದ್ಯಾನಿಲಯ ಇಂದು ಕೂಡ ಪ್ರಬಲ ಸ್ಪರ್ಧೆ ಒಡ್ಡುತ್ತಾ ತನ್ನ ಪ್ರಾಬಲ್ಯ ಮುಂದುವರಿಸಿದೆ.ಪುರುಷರ ವಿಭಾಗದ ೧೦೦ ಮೀಟರ್ ಹರ್ಡಲ್ಸ್‌ನಲ್ಲಿ ಮಧುರೈ ಕಾಮರಾಜ್ ವಿಶ್ವವಿದ್ಯಾಲಯದ ಎಂ.ರಿತಿಕ್ ರಾಹುಲ್ ಚಿನ್ನ ಗೆದ್ದು

ಬೀಗಿದರು. ಮಂಗಳೂರು ವಿವಿಯ ಸುಶಾಂತ್ ಎಂ.ಡಿ. ಬೆಳ್ಳಿ ಪದಕ ವಿಜೇತರಾದರು. ಕ್ಯಾಲಿಕಟ್ ವಿವಿಯ ಸಾಹುಲ್ ಎಸ್. ತೃತೀಯ ಸ್ಥಾನದೊಂದಿಗೆ ಕಂಚಿನ ಪದಕದ ಗೌರವ ಪಡೆದರು.

ಮಹಿಳೆಯರ ವಿಭಾಗದ ೧೦೦ ಮೀಟರ್ ಹರ್ಡಲ್ಸ್‌ನಲ್ಲಿ ಎಂ.ಜಿ. ವಿಶ್ವವಿದ್ಯಾಲಯದ ಶೀಬಾ ಡಿ ಚಿನ್ನ, ಬೆಂಗಳೂರು ಜೈನ್ ವಿಶ್ವವಿದ್ಯಾಯದ ಶ್ರೀಯಾ ರಾಜೇಶ್ ಬೆಳ್ಳಿ ಮತ್ತು ಮದ್ರಾಸ್ ವಿವಿಯ ಅಕ್ಷಿಂಡ ಎಸ್ ಕಂಚಿನ ಪದಕ ಗೆದ್ದರು. ಮಹಿಳಾ ವಿಭಾಗದ ಲಾಂಗ್ ಜಂಪ್‌ನಲ್ಲಿ ಕಳಿಂಗ ವಿವಿಯ ಇಶಾ ನೇಗಿ ಚಿನ್ನ, ಕಲ್ಯಾಣ್ ವಿವಿಯ ರಿಣಿ ಕೌತುಮ್ ಬೆಳ್ಳಿ ಮತ್ತು ಎಸ್‌ಆರ್‌ಎಂ ವಿವಿಯ ಅನಾಮಿಕ ಕೆ.ಎ. ಕಂಚಿನ ಪದಕ ವಿಜೇತರಾದರು. ಮಹಿಳಾ ವಿಭಾಗದ ಜಾವೆಲಿನ್ ವಿಭಾಗದಲ್ಲಿ ಲವ್ಲಿ ಪ್ರೊಫೆಷನಲ್ ವಿಶ್ವವಿದ್ಯಾಲಯದ ಕೀರ್ತಿ ಇಶರ್‌ವಾಲ್ ಮತ್ತು ತನಿಷ್ಕಾ ಶರ್ಮಾ ಕ್ರಮವಾಗಿ ಚಿನ್ನ ಮತ್ತು ಬೆಳ್ಳಿ, ಗುರುನಾನಕ್ ದೇವ್ ವಿಶ್ವವಿದ್ಯಾಲಯದ ಡೋಲಿ ಸೊಂಕರ್ ಕಂಚಿನ ಪದಕ ಗೆದ್ದುಕೊಂಡರು. ಮಹಿಳಾ ವಿಭಾಗದ ಪೋಲ್ ವಾಲ್ಟ್‌ನಲ್ಲಿ ಚಂಡೀಗಡ ವಿವಿಯ ವನ್ಶಿಕಾ ಗಂಗಾಸ್ ಚಿನ್ನ, ಮದ್ರಾಸ್ ವಿವಿಯ ಕಾರ್ತಿಕಾ ವಿ ಬೆಳ್ಳಿ ಮತ್ತು ಕ್ಯಾಲಿಕಟ್ ವಿವಿಯ ನೇಹಾ ಕಂಚಿನ ಪದಕಕ್ಕೆ ಭಾಜನರಾದರು.

*******END*******